ಶ್ರೀ ಜಿ. ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) 1) ರೂ. 2.00 ಕೋರ್ಟು ಫೀ ಸ್ಟಾಂಪ್‌ನೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ನೀಡಬೇಕು.

2) 2 ಪಾಸ್‌ಪೋರ್ಟ್ ಸೈಜಿನ ಭಾವಚಿತ್ರ.

3) ಸ್ವಂತ ಮನೆಯಾಗಿದ್ದರೆ ತೆರಿಗೆ ಸಂದಾಯದ ರಶೀಧಿ, ಬಾಡಿಗೆ ಮನೆಯಾಗಿದ್ದಲ್ಲಿ ಬಾಡಿಗೆ ಕರಾರು ಪತ್ರ ಅಥವಾ ಮನೆ ಮಾಲೀಕರಿಂದ ಪಡೆದ ಪತ್ರ.

4) ಮತದಾರರ ಪಟ್ಟಿಯ ಪ್ರತಿ.

5) ಪಡಿತರ ಚೀಟಿಯಿಂದ ಅಥವಾ ಹೆಸರು ತೆಗೆದ ಬಗ್ಗೆ ಕಡಿತ ಪ್ರಮಾಣ ಪತ್ರ ಅಥವಾ ಪಡಿತರ ಚೀಟಿಯನ್ನು ಅದ್ಯರ್ಪಣಾ ಮಾಡಿದ ಬಗ್ಗೆ ಪ್ರಮಾಣ ಪತ್ರ ಅಥವಾ ತಹಸೀಲ್ದಾರರಿಂದ ಪಡಿತರ ಚೀಟಿ ಪಡೆದಿಲ್ಲವೆಂಬುದರ ಬಗ್ಗೆ ಧೃಢೀಕರಣ ಪತ್ರ.

ಆ) ಹೌದು.

ಇ) ಪಡಿತರ ಚೀಟಿಗಳನ್ನು ವಿತರಣೆ ಮಾಡಲು ನಿಗಧಿ ಪಡಿಸಿರುವ ದಾಖಲಾತಿಗಳು ಅರ್ಜಿದಾರರ ನಿಜಾಂಶವನ್ನು ತಿಳಿಯಲು ಹಾಗೂ ಇಲಾಖೆಯಿಂದ ವಿತರಿಸುವ ಪಡಿತರ ಚೀಟಿಗಳ ನಿಖರತೆಯನ್ನು ತಿಳಿಯಲು ಅವಶ್ಯಕತೆ ಇರುತ್ತದೆ. ಆದ್ದರಿಂದ ಈ ದಾಖಲಾತಿಗಳು ಅಗತ್ಯವಾಗಿರುತ್ತವೆ.

ಸ್ವಾತಂತ್ರ್ಯೋತ್ಸವ 50ನೇ ವರ್ಷದ ಅಂಗವಾಗಿ ಮಹಿಳಾ ಖೈದಿಗಳ ಬಿಡುಗಡೆ.

2064 - ಶ್ರೀಮತಿ ಹೇಮಾವತಿ (ಶಾಂತಿನಗರ) : ಮಾನ್ಯ ಕಾರಾಗೃಹ, ಗೃಹ ರಕ್ಷಕ ದಳ, ನಾಗರೀಕ ರಕ್ಷಣೆ ಮತ್ತು ಸೈನಿಕ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ವಾತಂತ್ರೋತ್ಸವದ 50ನೇ ವರ್ಷದ ಅಂಗವಾಗಿ ರಾಜ್ಯದ ವಿವಿಧ ಕಾರಾಗೃಹಗಳಿಂದ ಎಷ್ಟು ಜನ ಖೈದಿಗಳನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ.

ಆ) ಅವರುಗಳಲ್ಲಿ ಮಹಿಳಾ ಖೈದಿಗಳ ಸಂಖ್ಯೆ ಎಷ್ಟು?

ಇ) ಈ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಖೈದಿಗಳನ್ನು ಬಿಡುಗಡೆ ಮಾಡಲು ಸರ್ಕಾರವು ಪರಿಶೀಲಿಸುತ್ತದೆಯೇ?

ಶ್ರೀ ವಿ. ಸೋಮಣ್ಣ (ಕಾರಾಗೃಹ, ಗೃಹ ರಕ್ಷಕ ದಳ ನಾಗರೀಕ ರಕ್ಷಣೆ ಮತ್ತು ಸೈನಿಕ ಕಲ್ಯಾಣ ರಾಜ್ಯ ಸಚಿವರು) :

ಅ) 12 ವರ್ಷ ವಾಸ್ತವಿಕ ಸಜೆ ಅನುಭವಿಸಿದ 37 ಜನ ಜೀವಾವಧಿ ಶಿಕ್ಷೆ ಅನುಭವಿಸಿದ ಖೈದಿಗಳನ್ನು ಸನ್ಮಾನ್ಯ ರಾಜ್ಯಪಾಲರಿಂದ ಕ್ಷಮಾಧಾನ ದೊರಕಿಸಿ ಬಿಡುಗಡೆ ಮಾಡಲು ಪರಿಶೀಲಿಸಲಾಗುತ್ತಿದೆ.

ಆ) ಅಕಾಲಿಕ ಬಿಡುಗಡೆಗೆ ಯಾವುದೇ ಮಹಿಳಾ ಖೈದಿಯು ಅರ್ಹರಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಆನಂದ ನಗರದಲ್ಲಿ ಹೊಸ ಆರಕ್ಷಕ ಠಾಣೆ

2065 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಗೃಹ ಮತ್ತು ವಕ್ಫ್ ಖಾತೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ, ಗ್ರಾಮೀಣ ಕ್ಷೇತ್ರದ ಆನಂದ ನಗರದಲ್ಲಿ ಹೊಸ ಪೋಲೀಸ್ ಠಾಣೆಯನ್ನು ತೆರೆಯುವ ವಿಚಾರವು ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು?

ಇ) ಯಾವಾಗ ಈ ಠಾಣೆಯನ್ನು ಪ್ರಾರಂಭಿಸಲಾಗುವುದು?

ಶ್ರೀ ಆರ್. ರೋಷನ್ ಬೇಗ್ (ಗೃಹ ಮತ್ತು ವಕ್ಫ್ ಖಾತೆ ರಾಜ್ಯ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಹುಬ್ಬಳ್ಳಿ - ಧಾರವಾಡ ಮಹಾನಗರದಲ್ಲಿ ಪೋಲೀಸ್ ಸಿಬ್ಬಂದಿಗಳ ಕೊರತೆ

2066 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಹುಬ್ಬಳ್ಳಿ - ಧಾರವಾಡ ಮಹಾನಗರದಲ್ಲಿರುವ ಪೋಲೀಸ್ ಸಿಬ್ಬಂದಿಗಳ ಸಂಖ್ಯೆ ಎಷ್ಟು?

2. ಇನ್ನೂ ಎಷ್ಟು ಸಿಬ್ಬಂದಿಯ ಅವಶ್ಯಕತೆ ಇದೆ. ಸಿಬ್ಬಂದಿಯನ್ನು ತುಂಬಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಆರ್. ರೋಷನ್‌ಬೇಗ್ (ಗೃಹ ಮತ್ತು ವಕ್ಫ್ ರಾಜ್ಯ ಸಚಿವರು) :

ಅ) 1567

ಆ) ಈ ಘಟಕಕ್ಕೆ ಒಟ್ಟು 825 ವಿವಿಧ ದರ್ಜೆಯ ಸಿಬ್ಬಂದಿಗಳ ಅವಶ್ಯಕತೆ ಇದೆ. ಕಡಿಮೆ ಬಲವಿರುವ ಪೋಲೀಸ್ ಠಾಣೆಗಳಿಗೆ ಸಿಬ್ಬಂದಿ ಬಲ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿ ನೀರಾವರಿ ಕಾಮಗಾರಿ

2067 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?